ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.
ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 5-8-2016

# ಪತ್ರಿಕಾ ಪ್ರಕಟಣೆ

## ರಾಷ್ಟ್ರೀಯ ಮಿಲಿಟರಿ ಶಾಲಾ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, ಆಗಸ್ಟ್ 5 (ಕರ್ನಾಟಕ ವಾರ್ತೆ)**

ಡೆಹಾರಡೂನ್‌ನಲ್ಲಿರುವ ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಶಾಲೆಯಲ್ಲಿ ಎಂಟನೇ ತರಗತಿ ಪ್ರವೇಶಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಭರ್ತಿಮಾಡಿದ ನಿಗದಿತ ಅರ್ಜಿ ನಮೂನೆಯನ್ನು ದ್ವಿಪ್ರತಿಯಲ್ಲಿ ಸೆಪ್ಟೆಂಬರ್ 30 ರೊಳಗೆ ಸಲ್ಲಿಸಬೇಕು. ವಿವರಣಾ ಪತ್ರ ಹಳೆ ಪ್ರಶ್ನೆ ಪತ್ರಿಕೆ ಅರ್ಜಿ ನಮೂನೆಗಳನ್ನು ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಭವನ, ನಂ 58, ಕೆ.ಎಂ. ಕಾರ್ಯಪ್ಪ ರಸ್ತೆ, ಬೆಂಗಳೂರು – 560 025 ಇವರನ್ನು ಸಂಪರ್ಕಿಸಬೇಕು.

ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 080 – 25589459 ಅಥವಾ ಆಯಾ ಜಿಲ್ಲಾ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಕಾರ್ಯಾಲಯವನ್ನು ಸಂಪರ್ಕಿಸಲು ಕೋರಿದೆ.

**ಬಾಬು:ಜಿಪಿಆರ್.**

## ಅಂತಿಮ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು, ಆಗಸ್ಟ್ 5 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ರೇಷ್ಮೆ ಇಲಾಖೆಯಲ್ಲಿನ ಸಹಾಯಕ ಅಭಿಯಂತರರು (ಸಿವಿಲ್)-01 ಬ್ಯಾಕ್‌ಲಾಗ್ ಹುದ್ದೆ ಮತ್ತು ಔಷಧ ನಿಯಂತ್ರಣ ಇಲಾಖೆಯುಲ್ಲಿನ ಉಪನ್ಯಾಸಕರು (ಫಾರ್ಮಾಸ್ಯುಟಿಕ್ಸ್)-01 ಬ್ಯಾಕ್‌ಲಾಗ್ ಹುದ್ದೆಯ ಅಂತಿಮ ಆಯ್ಕೆಪಟ್ಟಿಗಳನ್ನು ಆಗಸ್ಟ್ 3 ರಂದು ಆಯೋಗದ ಅಂತರ್ಜಾಲ " http://kpsc.kar.nic.in/Selection Lists " ದಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಬಾಬು:ಜಿಪಿಆರ್.

# ಬ್ರಿಕ್ಸ್ ವೆಲ್‌ನೆಸ್ ಫೋರಂ ಹಾಗೂ ಆರೋಗ್ಯ ಎಕ್ಸ್‌ಪೋ– 2016 ಸಮ್ಮೇಳನ

**ಬೆಂಗಳೂರು, ಆಗಸ್ಟ್ 5 (ಕರ್ನಾಟಕ ವಾರ್ತೆ)**

ಸೆಪ್ಟೆಂಬರ್ 9 ರಿಂದ 12 ರವರೆಗೆ ಬೆಂಗಳೂರಿನಲ್ಲಿ ಬ್ರಿಕ್ಸ್ ರಾಷ್ಟ್ರಗಳ ಸಹಭಾಗಿತ್ವದಲ್ಲಿ ಭಾರತೀಯ ವೈದ್ಯ ಪದ್ಧತಿಗಳ ಕುರಿತಾಗಿ ಆಯುಷ್ ಮಂತ್ರಾಲಯ, ಭಾರತ ಸರ್ಕಾರ ಹಾಗೂ ಕರ್ನಾಟಕ ಸರ್ಕಾರದ ಆಯುಷ್ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಫಿಕ್ಕಿ (FICCI) ಇವರ ಸಹಯೋಗದೊಂದಿಗೆ ಬ್ರಿಕ್ಸ್‌ವೆಲನೆಸ್ ಫೋರಂ ಎನ್ನುವ ಅಂತರರಾಷ್ಟ್ರೀಯ ಸಮ್ಮೇಳನ ಹಾಗೂ ಆರೋಗ್ಯ ಎಕ್ಸ್‌ಪೋ – 2016 ವಿಶಿಷ್ಟ ಆಯುಷ್ ಪದ್ಧತಿಗಳ ಬಗ್ಗೆ ಪ್ರದರ್ಶನ ಹಾಗೂ ಮಾರಾಟವನ್ನು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಸಲಾಗುತ್ತಿದೆ.

ಈ ಸಮ್ಮೇಳನದಲ್ಲಿ ವಿವಿಧ ರಾಷ್ಟ್ರಗಳ ಸುಮಾರು 150 ಜನ ಪ್ರತಿನಿಧಿಗಳು ಭಾಗವಹಿಸಲಿದ್ದು, ಭಾರತೀಯ ವೈದ್ಯ ಪದ್ಧತಿಗಳ ಕುರಿತಾಗಿ ಚರ್ಚೆ ನಡೆಸಲಿದ್ದಾರೆ. ನಾಲ್ಕು ದಿನಗಳ ಆರೋಗ್ಯ ಎಕ್ಸ್‌ಪೋನಲ್ಲಿ ವಿವಿಧ ರಾಷ್ಟ್ರ ಹಾಗೂ ರಾಜ್ಯಗಳ ಸುಮಾರು 300 ಕ್ಕೂ ಹೆಚ್ಚಿನ ಔಷಧಿ ತಯಾರಿಕಾ ಕಂಪನಿಗಳಿಂದ ವಿವಿಧ ವೈದ್ಯ ಪದ್ಧತಿಗಳ ಕುರಿತಾಗಿ ಪ್ರದರ್ಶನ, ಮಾರಾಟ ಹಾಗೂ ಆಯುಷ್ ತಜ್ಞ ವೈದ್ಯರುಗಳಿಂದ ಉಚಿತ ವೈದ್ಯಕೀಯ ತಪಾಸಣೆ ಮಾಡಲಾಗುತ್ತದೆ.

ಬಾಬು:ಜಿಪಿಆರ್.

# ಸಚಿವರ ಪ್ರವಾಸ

**ಬೆಂಗಳೂರು, ಆಗಸ್ಟ್ 5 (ಕರ್ನಾಟಕ ವಾರ್ತೆ)**

ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಆಗಸ್ಟ್ 6 ರಂದು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರವಾಸ ಮಾಡುವರು.

ಬಾಬು:ಜಿಪಿಆರ್.

# ಬೆಳ್ಳಿಹೆಜ್ಜೆಯಲ್ಲಿ ಹಿರಿಯ ತಾರೆ ಲಕ್ಷ್ಮೀ

**ಬೆಂಗಳೂರು, ಆಗಸ್ಟ್ 5 (ಕರ್ನಾಟಕ ವಾರ್ತೆ)**

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಆಗಸ್ಟ್ 7 ರ ಶನಿವಾರದಂದು ಸಂಜೆ 5–00 ಗಂಟೆಗೆ ಬೆಂಗಳೂರಿನ ಕುಮಾರ ಕೃಪಾ ರಸ್ತೆಯ ಗಾಂಧೀ ಭವನದಲ್ಲಿರುವ ಮಹದೇವ ದೇಸಾಯಿ ಸಭಾಂಗಣದಲ್ಲಿ ಹಿರಿಯ ಚರ್ತುಭಾಷಾ ತಾರೆ ಶ್ರೀಮತಿ ಲಕ್ಷ್ಮೀ ಅವರ ಬೆಳ್ಳಿಹೆಜ್ಜೆ ಕಾರ್ಯಕ್ರಮವನ್ನು ಏರ್ಪಡಿಸಿದೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್.ಬಿ. ದಿನೇಶ್ ತಿಳಿಸಿದ್ದಾರೆ.

ಮುಖ್ಯ ಅತಿಥಿಗಳಾಗಿ ಕನ್ನಡ ಚಲನಚಿತ್ರ ನಟರಾದ ಪುನೀತ್ ರಾಜ್‌ಕುಮಾರ್, ಜೈ ಜಗದೀಶ್, ಚಲನಚಿತ್ರ ನಿರ್ದೇಶಕ ಎಸ್.ಕೆ. ಭಗವಾನ್, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷ ಸಾ.ರಾ. ಗೋವಿಂದು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್ ಅವರು ಪಾಲ್ಗೊಳ್ಳುವರು. ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಬೆಳ್ಳಿಹೆಜ್ಜೆ ಕಾರ್ಯಕ್ರಮದಲ್ಲಿ ಶ್ರೀಮತಿ ಲಕ್ಷ್ಮೀಯವರನ್ನು ಕುರಿತಾದ ಛಾಯಾಚಿತ್ರ ಪ್ರದರ್ಶನ ಹಾಗೂ ಸಾಕ್ಷ್ಯಚಿತ್ರ ಪ್ರದರ್ಶನವನ್ನು ಏರ್ಪಡಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಬಾಬು:ಕೆಎಂ